## ಮೊದಲನೇಯ ಪುಟದಿಂದ

# ಕ್ರಾಂತಿ, ಬ್ರಾಂತಿ ಎಲ್ಲಾ ಊಹಾಪೋಹಾ

ಮೂಲಕ ದೃಢಪಡಿಸಿದಂತಿತ್ತು.ಬಿಹಾರ ವಿಧಾನಸಭಾ ಚುನಾವಣೆ ನಂತರ ರಾಜ್ಯ ರಾಜಕೀಯದಲ್ಲಿ ಬದಲಾವಣೆಗಳಾಗುತ್ತವೆ ಎಂಬ ವರದಿಗಳನ್ನು ಒಪ್ಪದ ಅವರು, ಬಿಹಾರ ವಿಧಾನಸಭಾ ಚುನಾವಣೆ ಫಲಿತಾಂಶ ರಾಜ್ಯದ ಯಾವ ಪರಿಣಾಮ ಬೀರುವುದಿಲ್ಲ ಎಂದರು.ಬಿಹಾರದಲ್ಲಿ ಕಾಂಗ್ರೆಸ್–ಆರ್‌ಜೆಡಿ ನೇತೃತ್ವದ ಮೈತ್ರಿ ಒಕ್ಕೂಟ ಗೆಲುವು ಪಡೆಯುವ ಸಾಧ್ಯತೆ ಇದೆ. ಬಿಹಾರದಲ್ಲಿ ನನ್ನ ಪ್ರಚಾರದ ಅಗತ್ಯ, ಅವಶ್ಯಕತೆ ಇದ್ದರೆ ನಾನು ಪ್ರಚಾರಕ್ಕೆ ಹೋಗುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರು.ಮುಂದಿನ 5 ವರ್ಷ ನಮ್ಮ ತಂದೆ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿರುತ್ತಾರೆ ಎಂಬ ಯತೀಂದ್ರ ಸಿದ್ದರಾಮಯ್ಯನವರ ಹೇಳಿಕೆಗೆ ಪ್ರತಿಕ್ರಿಯಸದ ಅವರು, ಅವನನ್ನೆ ಈ ಬಗ್ಗೆ ಕೇಳಿಕೊಳ್ಳಿ ಎಂದು ಚುಟುಕು ಉತ್ತರ ನೀಡಿದರು.

ಈ ಸಂದರ್ಭದಲ್ಲಿ ಸಚಿವರುಗಳಾದ ಡಾ. ಶರಣ ಪ್ರಕಾಶ್ ಪಾಟೀಲ್, ಡಾ. ಹೆಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್ ಸೇರಿದಂತೆ ಹಲವು ಶಾಸಕರು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆಯಾಗಲಿ

ವಿವಿಧ ಶಾಲೆ ಹಾಗೂ ಕಾಲೇಜ್ ಗಳಿಂದ ಶಿಸ್ತು ಬದ್ಧವಾಗಿ ಪಥ ಸಂಚಲನ ನಡೆಯಲಿದೆ. ನಂತರ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯುವಂತೆ ಕ್ರಮವಹಿಸಬೇಕು. ಶಿಷ್ಟಾಚಾರದ ಅನ್ವಯ ಆಸನದ ವ್ಯವಸ್ಥೆಗೆ ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ□ಕಾಲೇಜು ವಿದ್ಯಾರ್ಥಿಗಳು, ಸಂಘ□ಸಂಸ್ಥೆಯವರು ಆಸಕ್ತಿಯಿಂದ ಭಾಗವಹಿಸುವಂತೆ ಪ್ರೇರೇಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯೋತ್ಸವ ಎಡೆದೊರೆ ಪ್ರಶಸ್ತಿ: ಕರ್ನಾಟಕ ರಾಜ್ಯೋತ್ಸವ –2025ರ ಅಂಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಾದ ಸಾಹಿತ್ಯ, ಪತ್ರಿಕೋದ್ಯಮ, ವೈದ್ಯಕೀಯ, ಸಂಸ್ಥೆ, ಕೃಷಿ ಹಾಗೂ ಆಶ್ರಯ ಕ್ಷೇತ್ರದಲ್ಲಿ ಸಾಧನೆ ಮಾಡಿದ ಜಿಲ್ಲೆಯ ವಿವಿಧ ಗಣ್ಯರಿಗೆ ಅಂದು ರಾಜ್ಯೋತ್ಸವ ಎಡೆದೊರೆ ಪುರಸ್ಕಾರ ನೀಡಿ ಸನ್ಮಾನಿಸಿ ಗೌರವಿಸಲಾಗುತ್ತದೆ. ಈ ಆಯ್ಕೆಯು ಪಾರದರ್ಶಕವಾಗಿ ನಡೆಸಲು ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ, ಕರ್ನಾಟಕ ಸಂಘದ ಅಧ್ಯಕ್ಷರಾದ ಕೆ.ಶಾಂತಪ್ಪ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್.ಗುರುನಾಥ, ಕನ್ನಡ ಪರ ಸಂಘಟನೆಗಳ ಮುಖಂಡರಾದ ಬಸವರಾಜ ಕಳಸ, ವಿನೋದ ರೆಡ್ಡಿ, ಅಲ್ತಾಫ್, ಕೆ.ಶ್ರೀನಿವಾಸ, ಮಾರುತಿ ಬಡಿಗೇರ, ಅಣ್ಣಪ್ಪ ಮೇಟಿಗೌಡ, ಎಂ.ಬಸವರಾಜ, ಶಿವಕುಮಾರ್ ಯಾದವ್, ವನಿತಾ ಆರ್., ಚಂದ್ರಶೇಖರ ನಾಗಡದಿನ್ನಿ ಸೇರಿದಂತೆ ವಿವಿಧ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ಹೋಟೆಲ್‌ಗಳಲ್ಲಿ ಗ್ರಾಹಕರಿಗೆ ಶುಚಿತ್ವ ಆಹಾರ ನೀಡಲು ಸಹಾಯಕ ಆಯುಕ್ತರ ಸೂಚನೆ

ಹೋಟೆಲ್‌ಗಳನ್ನು ಸ್ವಚ್ಚತೆಯಿಂದ ಇಟ್ಟುಕೊಳ್ಳಬೇಕು. ಹೋಟೆಲ್‌ಗಳಲ್ಲಿ ಸುಡುವ ಪದಾರ್ಥಗಳನ್ನು ಪ್ಲಾಸ್ಟಿಕ್‌ನಲ್ಲಿ ಹಾಕಿ ನೀಡಬಾರದು ಎಂದು ತಿಳಿಸಿದರು.ಈ ವೇಳೆ ಜಿಲ್ಲಾ ಅಂಕಿತ ಅಧಿಕಾರಿಗಳು ಮಾತನಾಡಿ, ಹೋಟಲ್‌ಗಳು ಪ್ರಾರಂಭಿಸುವ ಮೊದಲು ಕಡ್ಡಾಯವಾಗಿ ನೋಂದಣಿ ಅಥವಾ ಪರವಾನಿಗೆ ಪಡೆಯಬೇಕು.

ಗ್ರಾಹಕರಿಗೆ ಶುಚಿತ್ವ ಹಾಗೂ ಪೌಷ್ಟಿಕಯುಕ್ತ ಆಹಾರವನ್ನು ನೀಡಬೇಕು. ಗ್ರಾಹಕರು ದೇವರೆಂದು ಭಾವಿಸಬೇಕು. ಅಡುಗೆ ಕೋಣೆ ಸಿಬ್ಬಂದಿ ಹಾಗೂ ಕೆಲಸಗಾರರು ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದಿರಬೇಕು ಎಂದು ತಿಳಿಸಿದರು.ಈ ವೇಳೆ ಹಳ್ಳಿಮನೆ ಹೋಟೆಲ್ ಮಾಲೀಕರಾದ ಹನಮಂತು ಮಾತನಾಡಿ, ಎಲ್ಲಾ ಹೋಟೆಲ್ ಮಾಲೀಕರು ಗ್ರಾಹಕರಿಗೆ ಶುಚಿತ್ವ ಹಾಗೂ ಪೌಷ್ಟಿಕ ಆಹಾರ ನೀಡಬೇಕು. ಅದೇ ರೀತಿಯಾಗಿ ಸಭೆಯಲ್ಲಿ ಚರ್ಚಿಸಿದ ವಿಷಯಗಳನ್ನು ಗಂಭೀರವಾಗಿ ತೆಗೆದುಕೊಂಡು ಒಂದು ತಿಂಗಗಳೊಳಗಾಗಿ ಸರಿಪಡಿಸಿಕೊಂಡು ಗ್ರಾಹಕರಿಗೆ ಶುಚಿಯಾದ ಹಾಗೂ ಪೌಷ್ಟಿಕಯುಕ್ತ ಆಹಾರ ನೀಡಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಮಾಲೀಕರು ಸಭೆಯಲ್ಲಿ ಇದ್ದರು.

# ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ : ಪೂರ್ವಭಾವಿ ಸಿದ್ಧತಾ ಸಭೆ

ಕಡ್ಡಾಯವಾಗಿ ಜಯಂತಿ ಆಚರಿಸಬೇಕು ಎಂದು ಸೂಚನೆ ನೀಡಿದರು.

ವೇದಿಕೆಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕ್ಕೆ ಏರ್ಪಾಡು ಮಾಡಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ, ಸಮಾಜದ ಮುಖಂಡರಾದ ಚಂದ್ರಶೇಖರ ಪಾಟೀಲ ಮಿರ್ಜಾಪುರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಜಿಲ್ಲಾ ಪಂಚಾಯತ್ ಆಡಳಿತ ಭವನದಲ್ಲಿ ಜಿಪಂ ಸಿಇಓ ಸಂಚಾರ: ಅಧಿಕಾರಿ, ಸಿಬ್ಬಂದಿ ಕಾರ್ಯವೈಖರಿ ಪರಿಶೀಲನೆ



**ರಾಯಚೂರು,ಅ.17–** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ಕಾರ್ಯದೊತ್ತಡದ ಮಧ್ಯೆಯೂ ಅಕ್ಟೋಬರ್ 17ರಂದು ಜಿಲ್ಲಾ ಪಂಚಾಯತನ ಆಡಳಿತ ಭವನದಲ್ಲಿನ ವಿವಿಧೆಡೆ ಸಂಚರಿಸಿ ಅಧಿಕಾರಿ ಮತ್ತು ಸಿಬ್ಬಂದಿಯ ಕಾರ್ಯ ನಿರ್ವಹಣೆಯ ಬಗ್ಗೆ ಪರಿಶೀಲಿಸಿದರು.

ಜಿಲ್ಲಾ ಪಂಚಾಯತನ ಕಚೇರಿಯಲ್ಲಿರುವ ಸ್ಟೋರ್ ರೂಂ, ಆಡಳಿತ ಶಾಖೆ, ಲೆಕ್ಕಪತ್ರ ಶಾಖೆ, ಲೆಕ್ಕ ಶಾಖೆ, ಎನ್.ಆರ್.ಎಲ್.ಎಂ., ಸ್ವಚ್ಛಭಾರತ ಮಿಷನ್ ಯೋಜನೆಯ ಕಚೇರಿ ಸೇರಿದಂತೆ ವಿವಿಧೆಡೆ ಖುದ್ದು ತೆರಳಿ ಅಲ್ಲಿನ ಅಧಿಕಾರಿ ಮತ್ತು ಸಿಬ್ಬಂದಿಯ ಜೊತೆಗೆ ಮಾತನಾಡಿ ಅವರ ಕಾರ್ಯವೈಖರಿಯ ಬಗ್ಗೆ ಪರಿಶೀಲಿಸಿದರು. ಶಿಸ್ತನ್ನು ಕಾಯ್ದುಕೊಳ್ಳಲು ಸಲಹೆ ಮಾಡಿದರು.

ಕಚೇರಿಯಲ್ಲಿ, ಯಾವುದೇ ಕಡತಗಳು ಎಲ್ಲೆಂದರಲ್ಲಿ ಕಾಣಬಾರದು. ಅವುಗಳನ್ನು ಅನುಕ್ರಮವಾಗಿ ಜೋಡಿಸಿಡಬೇಕು. ಅವಶ್ಯಕ ಸಂದರ್ಭದಲ್ಲಿ ಯಾವುದೇ ಕಡತವು ತಕ್ಷಣ ಕೈಗೆ ಸಿಗುವ ಹಾಗೆ ಕಡತಗಳನ್ನು ಆದ್ಯತೆನುಸಾರ ಜೋಡಣೆ ಮಾಡಿ ಪ್ರತಿನಿತ್ಯ ಕಾರ್ಯನಿರ್ವಹಿಸಬೇಕು. ಕಡತಗಳ ರಕ್ಷಣೆಗೆ ಹೆಚ್ಚಿನ ಒತ್ತು ಕೊಡಬೇಕು ಎಂದು ಸಲಹೆ ಮಾಡಿದರು.ಯಾವುದೇ ಕಚೇರಿಯಲ್ಲಿ ಆವಕ ಜಾವಕ ವಹಿಗಳ ನಿರ್ವಹಣೆ ಅತ್ಯಗತ್ಯವಾಗಿದೆ. ಈ ಬಗ್ಗೆ ಅಧಿಕಾರಿಗಳು ಮತ್ತು ಸಿಬ್ಬಂದಿ ಗಮನ ಹರಿಸಬೇಕು. ಯಾವುದೇ ಶಾಖೆಯಲ್ಲಿ ಪತ್ರಗಳನ್ನು, ಕಡತಗಳನ್ನು ಎಲ್ಲೆಂದರಲ್ಲಿ ಹರಡಬಾರದು. ಕಡತಗಳ ರಕ್ಷಣೆ ಮತ್ತು ನಿರ್ವಹಣೆಯಲ್ಲಿ ಯಾರಾದರು ಲೋಪ ಎಸಗುವುದು ಕಂಡುಬಂದಲ್ಲಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಇದೆ ವೇಳೆ ಸಿಇಓ ಅವರು ಶಿಶುಪಾಲನಾ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಮಕ್ಕಳ ಯೋಗಕ್ಷೇಮ ಮತ್ತು ಸೌಕರ್ಯಗಳ ಬಗ್ಗೆ ಪರಿಶೀಲಿಸಿದರು.

ಈ ವೇಳೆ ಜಿಲ್ಲಾ ಪಂಚಾಯತನ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ, ಗ್ರಾ.ಕು.ನೀ ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಸೇರಿದಂತೆ ವಿವಿಧ ಯೋಜನೆಯ ಅಧಿಕಾರಿ ಸಿಬ್ಬಂದಿ ಹಾಜರಿದ್ದರು.

# ಶಬರಿಮಲೆ ದೇವಾಲಯದಲ್ಲಿ ಚಿನ್ನ ಕಳವು ಬೆಂಗಳೂರು ಉದ್ಯಮಿ ಸೆರೆ



**ತಿರುವನಂತಪುರಂ,ಅ.17–**ಶಬರಿಮಲೆ ದೇವಸ್ಥಾನದ ಮುಂಭಾಗದ ದ್ವಾರಪಾಲಕರ ಪ್ರತಿಮೆಯಲ್ಲಿನ ಚಿನ್ನ ಕಾಣೆಯಾಗಿರುವ ಪ್ರಕರಣದ ಸಂಬಂಧ ತನಿಖೆ ಚುರುಕುಗೊಂಡಿದೆ.

ಈ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿಯನ್ನು ಬಂಧಿಸಿದೆ. ಬೆಂಗಳೂರು ಮೂಲದ ಉದ್ಯಮಿ ಉನ್ನಿಕೃಷ್ಣನ್ ಪೊಟ್ಟಿ ಅವರನ್ನು ಎಸ್‌ಐಟಿ ಅಧಿಕಾರಿಗಳು ಅವರ ನಿವಾಸದಲ್ಲಿ ಬಂಧಿಸಿದ್ದಾರೆ. ಅಲ್ಲಿಂದ ತಿರುವನಂತಪುರದ ಅಪರಾಧ ಶಾಖೆಯ ಕಚೇರಿಗೆ ಕರೆದುಕೊಂಡು ಬಂದು ವಿಚಾರಣೆಯನ್ನು ನಡೆಸಿದ್ದಾರೆ.

ಉನ್ನಿಕೃಷ್ಣನ್ ಪೊಟ್ಟಿ ವೈದ್ಯಕೀಯ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ವಿಚಾರಣೆ ನಂತರ ಅವರನ್ನು ಪತ್ತನಂತಿಟ್ಟದ ರನ್ನಿಯಲ್ಲಿರುವ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದೆ. ಈ ವೇಳೆ ಕೋರ್ಟ್ ಮುಂದೆ ಎಸ್‌ಐಟಿ ಅಧಿಕಾರಿಗಳು ವಿಚಾರಣೆ ನಡೆಸಲು ಕಸ್ಟಡಿಗೆ ನೀಡುವಂತೆ ಕೇಳುವ ಸಾಧ್ಯತೆ ಇದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇರಳ ಹೈಕೋರ್ಟ್‌ನ ನಿರ್ದೇಶನದ ಮೇರೆಗೆ ಈ ಎಸ್‌ಐಟಿ ತಂಡದ ರಚನೆ ಮಾಡಲಾಗಿದೆ.

ದ್ವಾರಪಾಲಕರಿಗೆ ಚಿನ್ನದ ಲೇಪನ ಮಾಯ:1999 ರಲ್ಲಿ, ಟಿಡಿಬಿ ಪ್ರವೇಶದ್ವಾರದಲ್ಲಿ ದ್ವಾರಪಾಲಕರಿಗೆ ಚಿನ್ನದ ಲೇಪನವನ್ನು ಮಾಡಿಸಲಾಗಿತ್ತು. ಯುಬಿ ಗ್ರೂಪ್ ಅಧ್ಯಕ್ಷ ವಿಜಯ್ ಮಲ್ಯ 30 ಕೆಜಿ ಚಿನ್ನವನ್ನು ನೀಡಿದರು. ದ್ವಾರಪಾಲಕ ವಿಗ್ರಹಗಳನ್ನು ಮಾತ್ರ ಮುಚ್ಚಲು ಐದು ಕಿಲೋಗ್ರಾಂಗಳಷ್ಟು ಚಿನ್ನವನ್ನು ಬಳಸಲಾಯಿತು ಮತ್ತು ಉಳಿದದ್ದನ್ನು ದೇವಾಲಯದ ಇತರ ವೈಶಿಷ್ಟ್ಯಗಳನ್ನು ಲೇಪಿಸಲು ಬಳಸಲಾಯಿತು. ಇಪ್ಪತ್ತು ವರ್ಷಗಳ ನಂತರ, ದೇವಾಲಯದ ವಿಗ್ರಹಗಳು ಮತ್ತು ಬೆಲೆಬಾಳುವ ವಸ್ತುಗಳ ಚಿನ್ನದ ಲೇಪನವನ್ನು ತನ್ನ ಸ್ವಂತ ಖರ್ಚಿನಲ್ಲಿ ಮಾಡಲು ಟಿಡಿಬಿಯ ಅನುಮೋದನೆಯನ್ನು ಪಡೆದಿದ್ದರು.

ಹಸ್ತಾಂತರ ದಾಖಲೆಯಲ್ಲಿ 1999ರಲ್ಲಿ ನೀಡಲಾದ ಚಿನ್ನದ ಹೊದಿಕೆಯ ಬಗ್ಗೆ ಯಾವುದೇ ಉಲ್ಲೇಖವಿಲ್ಲ.ವಿಗ್ರಹಗಳು ಚಿನ್ನದ ಲೇಪನಕ್ಕಾಗಿ ಚೆನ್ನೈನ ಸ್ಮಾರ್ಟ್ ಕ್ರಿಯೇಷನ್ಸ್‌ಗೆ ಹೋಗಿದ್ದವು. ಚಿನ್ನದಿಂದ ಲೇಪಿತವಾದ ತಾಮ್ರದ ತಟ್ಟೆಗಳನ್ನು ದೇವಾಲಯಕ್ಕೆ ಮರಳಿ ತಂದಾಗ, ಬರೋಬ್ಬರಿ 4.54 ಕೆಜಿ ಲೇಪನ ಕಾಣೆಯಾಗಿತ್ತು.

ಕಳೆದ 2019 ರಲ್ಲಿ ದ್ವಾರಪಾಲಕ ವಿಗ್ರಹಗಳಿಂದ ಚಿನ್ನದ ಹೊದಿಕೆಯ ತಾಮ್ರದ ತಟ್ಟೆಗಳು ಮತ್ತು ಶ್ರೀಕೋವಿಲ್ ಬಾಗಿಲಿನ ಚೌಕಟ್ಟುಗಳನ್ನು ಎಲೆಕ್ಟ್ರೋಪ್ಲೇಟಿಂಗ್‌ಗಾಗಿ ಪಾಟಿಗೆ ಹಸ್ತಾಂತರಿಸುವಲ್ಲಿ ತಿರುವಾಂಕೂರು ದೇವಸ್ವಂ ಮಂಡಳಿ (ಟಿಡಿಬಿ) ಸದಸ್ಯರು ಮತ್ತು ಅಧಿಕಾರಿಗಳ ಪಾತ್ರ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸಬೇಕಿದೆ.ಇನ್ನು ಇದಕ್ಕೂ ಮೊದಲು ಟಿಡಿಬಿ ವಿಜಿಲೆನ್ಸ್ ವಿಂಗ್ ಪಾಟಿ ಅವರನ್ನು ವಿಚಾರಣೆ ನಡೆಸಿ, ಅವರ ಹೇಳಿಕೆಯನ್ನು ಕೂಡ ಪಡೆಯಲಾಗಿದೆ. ಇನ್ನು ಈ ಪ್ರಕರಣದ ತನಿಖೆಯನ್ನು 6 ತಿಂಗಳ ಒಳಗೆ ಮುಗಿಸುವಂತೆ ಹೈಕೋರ್ಟ್ ಎಸ್‌ಐಟಿ ಅಧಿಕಾರಿಗಳಿಗೆ ಗಡುವು ನೀಡಿದ್ದಾರೆ.

# ಆರೋಗ್ಯಕರ ಆಹಾರ, ಕಾಳಜಿಪೂರ್ವಕ ಬಾಂಧವ್ಯ ಇಂದಿನ ಅಗತ್ಯ: ಬಟ್ಟು ಸತ್ಯನಾರಾಯಣ




**ಕಲಬುರಗಿ,ಅ.17–** ವಿದ್ಯಾರ್ಥಿಗಳು ಉತ್ತಮ ಆಹಾರ ಸೇವನೆ ಹಾಗೂ ವಿದ್ಯಾರ್ಥಿ ಜೀವನದಲ್ಲಿ ಒಂದೆಡೆ ಇದ್ದು ಅಧ್ಯಯನ ಮಾಡುವಾಗ ಪರಸ್ಪರ ಕಾಳಜಿಪೂರ್ವಕ ಬಾಂಧವ್ಯ ಹೊಂದುವುದು ಇಂದಿನ ಅಗತ್ಯ ಎಂದು ಕಡಗಂಚಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು. ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಉಪಕ್ರಮದ ಭಾಗವಾಗಿ ಜರುಗಿದ ಮಹಿಳೆಯರ ಆರೋಗ್ಯ ಮತ್ತು ಕೌಟುಂಬಿಕ ಯೋಗಕ್ಷೇಮಕ್ಕೆ ಮೀಸಲಾಗಿರುವ ರಾಷ್ಟ್ರವ್ಯಾಪಿ ಅಭಿಯಾನವಾದ ಸ್ವಸ್ತ್ ನಾರಿ, ಸಶಕ್ತ ಪರಿವಾರ ಅಭಿಯಾನ ದ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವಿರುವ ಸ್ಥಳದ ಸುತ್ತಮು ತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡರೆ ಆರೋಗ್ಯ ನಮ್ಮ ಸ್ವತ್ತಾಗುತ್ತದೆ. ಪರಿಸರ ಮಲಿನವಿದ್ದರೆ ಅನಅರೋಗ್ಯ ನಮ್ಮನ್ನು ಮುತ್ತಿಕೊಂಡುಬಿಡುತ್ತದೆ. ಜೀವನದಲ್ಲಿ ಎಂತಹ ಕಷ್ಟ ನಷ್ಟದ ಸನ್ನಿವೇಶ ಬಂದರೂ ಅದನ್ನು ಸವಾಲಾಗಿ ಸ್ವಿಕರಿಸಿ ಜೀವನದಲ್ಲಿ ಸಾಧಿಸಲು ಛಲ ತೊಡಬೇಕು. ಆರೋಗ್ಯದ ಕುರಿತು ಕಾಳಜಿ ವಹಿಸಿ ಎಂದು ಕರೆ ನೀಡಿದರು.

ನಂತರ ಮಾತನಾಡಿದ ರೇವಪ್ಪ ಹರವಾಳ ಸ್ಮಾರಕ ಆಸ್ಪತ್ರೆಯ ಪ್ರಸೂತಿ– ಸ್ತ್ರೀ ರೋಗ ತಜ್ಞೆ ಡಾ.ಮೀತಾ ಅಂಗಡಿ ಅವರು, ಮಾನಸಿಕ ಆರೋಗ್ಯದ ಬಗ್ಗೆ ವಿದ್ಯಾರ್ಥಿಗಳು ನಿರ್ಲಕ್ಷವಹಿಸಬಾರದು.ಮಾನಸಿಕ ಆರೋಗ್ಯ ದೈಹಿಕ ಆರೋಗ್ಯವನ್ನು ಉತ್ತಮ ಸ್ಥಿತಿಯಲ್ಲಿಡಲು ಬುನಾದಿ ಇದ್ದಂತೆ. ಜೀವನದ ವಿವಿಧ ಹಂತಗಳಲ್ಲಿ ಮಹಿಳೆಯರು ಮತ್ತು ಯುವಕರು ಎದುರಿಸುತ್ತಿರುವ ಆರೋಗ್ಯ ಸಮಸ್ಯೆಗಳನ್ನು ಅವರು ವಿವರಿಸಿದರು. ಮಹಿಳೆಯರ ಉತ್ತಮ ಆರೋಗ್ಯಕ್ಕಾಗಿ ಲಭ್ಯವಿರುವ ಲಸಿಕೆಗಳು ಮತ್ತು ರೋಗನಿರೋಧಕ ಲಸಿಕೆಗಳ ಬಗ್ಗೆ ವಿದ್ಯಾರ್ಥಿನಿಯರ ಜೊತೆ ಸಂವಾದ ಮಾಡಿದರು.

ಕಾರ್ಯಕ್ರಮದ ನೋಡಲ್ ಅಧಿಕಾರಿ ಪ್ರೊ.ಪವಿತ್ರಾ ಆಲೂರ್ ಅವರು ಕಡಗಂಚಿಯ ಕೇಂದ್ರೀಯ ವಿಶ್ವವಿದ್ಯಾಲಯವು ಆಯೋಜಿಸಿದ್ದ ಸರಣಿ ಕಾರ್ಯಕ್ರಮಗಳ ವಿವರವಾದ ವರದಿಯನ್ನು ವಾಚಿಸಿದರು. ಇದೇ ಸಂದರ್ಭದಲ್ಲಿ ರಕ್ತದಾನ ಮಾಡಿದ ವಿದ್ಯಾರ್ಥಿಗಳಿಗೆ ಮತ್ತು ಉಪನ್ಯಾಸಕರಿಗೆ ಕುಲಪತಿಗಳಿ ಂದ ಪ್ರಶಂಸನಾ ಪ್ರಮಾಣ ಪತ್ರ ವಿತರಿಸಲಾಯಿತು. ಸ್ವಪ್ನಿಲ್ ಚಾಪೇಕರ್ ಸ್ವಾಗತ ಗೀತೆ ಹಾಡಿದರೆ, ಡಾ.ಮಾಧುರಿ ಕೆ.ಆರ್ ಸ್ವಾಗತಿಸಿದರು. ಆಂಗ್ಲ ಭಾಷಾ ಶಿಕ್ಷಣ ತರಬೇತಿ ಕೇಂದ್ರದ ಅನಿಲ್ ಬಿ.ಕಾಂಬಳೆ ಕಾರ್ಯಕ್ರಮ ನಿರೂಪಿಸಿದರು.ಡಾ.ಭಾವನಾ ವಂದಿಸಿ ದರು. ಕಾರ್ಯಕ್ರಮದ ಸಂಯೋಜಕರಾದ ಡಾ.ಜ್ಯೋತಿ ತೆಗ್ನೂರ್, ಸಿಯುಕೆ ವೈದ್ಯಾಧಿಕಾರಿ ಡಾ.ಮಾಧುರಿ ಕಗಲೆ ರಘುನಾಥ್, ಡಾ.ಚಿತ್ಕಲಾ ವಿ., ಡಾ.ರಾಜಶ್ರೀ, ಡಾ.ರೇಣುಕಾ ಎಲ್.ನಾಯಕ್, ಪ್ರೋ.ವಿಜಯೇಂದ್ರ ಪಾಂಡೆ, ಪ್ರೋ.ಜಯವಾಲ್, ಡಾ.ಸ್ವಪ್ನಿಲ್, ಸೇರಿದಂತೆ ವಿವಿಧ ನಿಕಾಯದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಗುದಗೆ ಆಸ್ಪತ್ರೆಯಲ್ಲಿ ಟ್ರಾಮಾ ಕೇರ್ ಹಾಗೂ ನ್ಯುರೊ ಕೇರ್ ಲಭ್ಯ: ಡಾ.ಗುದಗೆ

**ಬೀದರ್:ಅ.17–** ಅಪಘಾತಕ್ಕೀಡಾಗಿ ತಲೆ ಗಾಯವಾಗಿ ಅಥವಾ ಮೆದುಳಿಗೆ ಪೆಟ್ಟಾದಲ್ಲಿ ನರಗಳು ಕಡಿತವಾಗಿ ರೋಗಿ ತನ್ನ ಸ್ಮರಣೆ ಕಳೆದುಕೊಳ್ಳುತ್ತಾನೆ. ಪ್ರಾಣ ಹಾನಿ ಸಹ ಸಂಭವಿಸುತ್ತದೆ. ಇಂಥ ಸಂದರ್ಭದಿಂದ ಪಾರಾಗಲು ಗುದಗೆ ಆಸ್ಪತ್ರೆಯಲ್ಲಿ ದಿನದ 24 ಗಂಟೆಗಳು ಸಹ ನುರಿತ ನರರೋಗ ತಜ್ಞರು ಲಭ್ಯವಿದ್ದು, ಜಿಲ್ಲೆಯ ಜನರು ಇದರ ಸದುಪಯೋಗ ಪಡೆದುಕೊಳ್ಳಬುದಾಗಿದೆ ಎಂದು ಆಸ್ಪತ್ರೆಯ ಮುಖ್ಯಸ್ಥರು ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಾ.ಚಂದ್ರಕಾಂತ ಗುದಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಸಿಸಿ ಮಾತನಾಡಿದ ಅವರು, ಅಪಘಾತ ಸಂಭವಿಸಿದ ಬಳಿಕ ತಲೆಗೆ ಗಾಯವಾಗುವುದು ಸಹಜ. ಹಾಗಾಗಿ ಕೂಡಲೇ ಪ್ರಥಮ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ ಜರೂರಿ ಇದ್ದು, ನಮ್ಮಲ್ಲಿ ಅದಕ್ಕೆ ಸಂಬಂಧಿಸಿದ ಎಲ್ಲ ರೀತಿಯ ಚಿಕಿತ್ಸೆ ಲಭ್ಯವಿದೆ. ತಲೆಯಲ್ಲಿ ಗಡ್ಡೆಯಾದರೆ, ಬ್ರೇನ್ ಟ್ಯುಮರ್‌ನಂತಹ ಭಯಾನಕ ಕಾಯಿಲೆ ಸಂಭವಿಸಿದರೂ ನಮ್ಮಲ್ಲಿ ಚಿಕಿತ್ಸೆ ನೀಡಲಾಗುವುದು ಎಂದರು.

ಬೀದರ್‌ನಲ್ಲಿ ಪಾರ್ಶ್ವವಾಯುವಿಗೆ ಸಂಬಂಧಿಸಿದಂತೆ ಡಾ.ಪ್ರಶಾಂಥ ಅಲ್ಲೆ ಅವರು ದಿನದ 24 ಗಂಟೆಗಳ ಕಾಲ ನಮ್ಮಲ್ಲಿ ಚಿಕಿತ್ಸೆ ನೀಡುವರು. ಪಾರ್ಶ್ವವಾಯು ಸಂಭವಿಸಿ ನಾಲ್ಕು ಗಂಟೆಗಳನ್ನು ಗೋಲ್ಡನ್ ಪಿರೆಡ್ ಎಂದು ಕರೆಯಲಾಗುತ್ತದೆ. ಆ ಸಮಯದಲ್ಲಿ ಚಿಕಿತ್ಸೆ ಪಡೆದರೆ ಗುಣಮುಖರಾಗುವರು. ಹಾಗಾಗಿ ಜಿಲ್ಲೆಯ ಸಾರ್ವಜನಿಕರು ಇಂಥ ವ್ಯವಸ್ಥೆ ತಮ್ಮದಾಗಿಸಿಕೊಳ್ಳಬಹುದೆಂದು ಕರೆ ನೀಡಿದರು.

ಆಸ್ಪತ್ರೆಯ ಹಿರಿಯ ವೈದ್ಯರಾದ ಡಾ.ಸಚೀನ ಗುದಗೆ ಅವರು ಡಾ.ಪ್ರಶಾಂತ ಅಲ್ಲೆ ಅವರ ಪರಿಚಯ ಗೈಯ್ಯುತ್ತ, ಡಾ.ಪ್ರಶಾಂತ ಅಲ್ಲೆ, ಅವರು ಹೊರ ದೇಶಗಳಲ್ಲಿ ವಿಶೇಷವಾಗಿ ಅಮೆರಿಕಾದ ಚಿಕ್ಯಾಗೊ, ನ್ಯುಯಾರ್ಕ್ ಇತ್ಯಾದಿ ಕಡೆ ಸೇವೆ ಮಾಡಿ ಪುಟ್ಟಪರ್ತಿ ಸಾಯಿಬಾಬಾದಲ್ಲಿ 14 ವರ್ಷ ಸೇವೆ ಸಲ್ಲಿಸಿ ಈಗ ನಮ್ಮಲ್ಲಿ ಸೇವೆಗೆ ಸಿದ್ಧರಾಗಿರುವರು. ಇವರ ಜೊತೆಗೆ ತಾನು, ಡಾ.ವೈಭವ ಭದಬದೆ, ಡಾ.ನಾಗಾಜ ಮಿತ್ರಾ, ಡಾ.ಸುಖಾನಂದ ಸೇರಿದಂತೆ ಎಲ್ಲ ತರಹದ ರೋಗಗಳಿಗೆ ನಮ್ಮಲ್ಲಿ ನುರಿತ ತಜ್ಞರು ಲಭ್ಯವಿರುವರು. ನಮ್ಮಲ್ಲಿ ಆಧುನಿಕ ತಂತ್ರಜ್ಞಾನವುಳ್ಳ ಟ್ರಾಮ ಕೇರ್ ಸೆಂಟರ್ ಲಭ್ಯವಿದೆ. ಹಾಗಾಗಿ ಅವರ ಸೇವೆಯನ್ನು ಬೀದರ್ ಜಿಲ್ಲೆ ಜನ ಸದುಪಯೋಗ ಪಡೆದುಕೊಳ್ಳುವರೆಂಬ ವಿಶ್ವಸವಿದೆ ಎಂದರು.

ಖ್ಯಾತ ನರರೋಗ ತಜ್ಞರಾದ ಡಾ.ಪ್ರಶಾಂತ ಅಲ್ಲೆ ಮಾತನಾಡಿ, ನಾನು ಹುಟ್ಟೂರಿನಲ್ಲಿ ಮತ್ತೆ ಸೇವೆ ಮಾಡುವ ಸಮಯ ಬಂದಿದೆ. ಇದು ನನ್ನ ಸೌಭಾಗ್ಯ. ಈ ತಿಂಗಳ 29ರಂದು ಗುದಗೆ ಆಸ್ಪ[ತ್ರೆಯಲ್ಲಿ ವರ್ಲ್ಡ್ ಸ್ಟ್ರೋಕ್ ಡೆ ಆಚರಿಸಲಾಗುತ್ತಿದ್ದು, ಅಂದು ಉಚಿತ ತಪಾಸಣೆ ಹಾಗೂ ರಿಯಾಯತಿ ದರದಲ್ಲಿ ಶಸ್ತ್ರ ಚಿಕಿತ್ಸೆ, ಎಮ್.ಆರ್.ಐ, ಸಿಟಿ ಸ್ಕ್ಯಾನ್ ಮಾಡಲಾಗುವುದು. 8 ಗಂಟೆ ನಿದ್ರೆ, ಸಕ್ಕರೆ ರಹಿತ ಊಟ, ಎಣ್ಣೆ ಪದಾರ್ಥಗಳ ಮಿತ ಬಳಿಕೆ, ಲಘು ವ್ಯಾಯಾಮ, ಒತ್ತಡಮುಕ್ತ ಜೀವನ ಸಾಗಿಸುವುದು, ಮೊಬೈಲ್ ಬಳಿಕೆ ಕಡಿಮೆ, ಯೋಗ ಹಾಗೂ ಧ್ಯಾನ ಮಾಡುವುದು, ವಾಯು ವಿಹಾರ ಇತ್ಯಾದಿ ಗಳನ್ನು ದಿನ ನಿತ್ಯದ ಬದುಕಿನಲ್ಲಿ ನಡೆದಾಗ ಪಾರ್ಶ್ವವಾಯುವಿನಿಂದ ದೂರ ಮುಕ್ತಿ ಪಡೆಯಬಹುದು ಎಂದರು.

ಆಸ್ಪತ್ರೆಯ ನುರಿತ ತಜ್ಞರಾದ ಡಾ.ನಿತಿನ್ ಗುದಗೆ, ಡಾ.ನಾಗರಾಜ ಮಿತ್ರಾ, ಡಾ.ವೈಭವ ಭದಬದೆ, ಡಾ.ಸುಖಾನಂದ, ಡಾ.ಮಹೇಶ ತೊಂಡಾರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಕೃಷಿ ಸಂಸ್ಕರಣ ಘಟಕಗಳ ಬಳಕೆಯಿಂದ ರೈತರ ಉತ್ಪನ್ನಗಳಿಗೆ ಹೆಚ್ಚಿನ ಬೆಲೆ: ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸಲಹೆ

**ರಾಯಚೂರು,ಅ.17–** ಕೃಷಿ ಸಂಸ್ಕರಣಾ ಘಟಕಗಳನ್ನು (ಅಗ್ರೋ ಪ್ರೊಸೆಸಿಂಗ್ ಸೆಂಟರ್) ಬಳಸಿಕೊಂಡಲ್ಲಿ ರೈತರ ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ಬೆಲೆ ಸಿಗಲಿದೆ. ರೈತರಿಗೆ ಮಾರುಕಟ್ಟೆ ಮತ್ತು ಸಂಪರ್ಕ ಸರಳವಾಗಲಿದೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ರೈತರಿಗೆ ಸಲಹೆ ಮಾಡಿದರು.

ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮದಲ್ಲಿ ಅಕ್ಟೋಬರ್ 16ರಂದು, ಭಾರತ ಸರ್ಕಾರ ಮತ್ತು ನಬಾರ್ಡ್ ಇವರ ಸಹಯೋಗದಲ್ಲಿ ನಡೆದ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಇಡೀ ರಾಯಚೂರು ಜಿಲ್ಲೆಯಾದ್ಯಂತ ಅಂದಾಜು 40 ಕೃಷಿ ಸಂಸ್ಕರಣ ಘಟಕಗಳ ಸ್ಥಾಪನೆ ಮಾಡಿ ಸಂಸ್ಕರಣೆಗೊಳಪಡಿಸುವಷ್ಟು ರಾಯಚೂರು ಜಿಲ್ಲೆಯೊಂದರಲ್ಲಿಯೇ ಪ್ರತಿ ವರ್ಷ ಅಂದಾಜು ಸಾವಿರಾರು ಮೆಟ್ರಿಕ್ ಟನ್ ದಷ್ಟು ತೊಗರಿ ಉತ್ಪನ್ನ ಬರುತ್ತದೆ ಎನ್ನುವ ಮಾಹಿತಿ ಇದೆ. ತುಂಗಭದ್ರಾ ಮತ್ತು ಕೃಷ್ಣಾ ನದಿಗಳ ಮಧ್ಯೆದ ಈ ಭೂಮಿಯು ಅತ್ಯಂತ ಸಂಪದ್ಭರಿತವಾಗಿದೆ. ಈ ಪ್ರದೇಶದಲ್ಲಿ ಪ್ರತಿ ವರ್ಷ ಅಂದಾಜು 80,000 ಮೆಟ್ರಿಕ್ ಟನ್ ತೊಗರಿ ಉತ್ಪನ್ನ ಹಾಗೂ ಅಂದಾಜು 34,000 ಮೆಟ್ರಿಕ್ ಟನ್ ಕಡಲೆ ಉತ್ಪನ್ನ ಬರುತ್ತಿದ್ದು, ಯಾವುದೇ ಉತ್ಪನ್ನ ಇರಲಿ ರೈತರು ಆಯಾ ಉತ್ಪನ್ನವನ್ನು ನೇರವಾಗಿ ಮಾರುಕಟ್ಟೆಗೆ ಸಾಗಿಸದೇ ಸಂಸ್ಕರಣೆಗೊಳಪಡಿಸಿ ಪ್ಯಾಕೇಟ್ ಅಥವಾ ಬೇರೆ ಬೇರೆ ರೂಪದಲ್ಲಿ ಮಾರಾಟ ಮಾಡಿದಲ್ಲಿ ಉತ್ತಮ ಬೆಲೆ ಸಿಗಲಿದೆ. ಈ ದಿಶೆಯಲ್ಲಿ ಯೋಚಿಸಿ ಕೇಂದ್ರ ಸರ್ಕಾರವು ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಹೆಚ್ಚಿನ ಒತ್ತು ನೀಡುತ್ತಿದೆ. ಇದರ ಭಾಗವಾಗಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಕ್ಕೆ ಹಸಿರುನಿಸಾನೆ ತೋರಲಾಗಿದೆ. ರೈತರು ಈ ಕೃಷಿ ಸಂಸ್ಕರಣಾ ಘಟಕಗಳ ಸದುಪಯೋಗ ಪಡೆಯಬೇಕು ಎಂದು ಸಲಹೆ ಮಾಡಿದರು.

ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನಗೆ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್) ನಮ್ಮೊಂದಿಗೆ ಕೈಜೋಡಿಸಿರುವುದು ಉತ್ತಮ ಬೆಳೆವಣಿಗೆಯಾಗಿದೆ. ರಾಜ್ಯ ಕೇಂದ್ರದಲ್ಲಿನ ಉನ್ನತ ಮಟ್ಟದ ಅಧಿಕಾರಿಗಳು, ಜಿಲ್ಲಾ ಕೇಂದ್ರದಲ್ಲಿನ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೃಷಿ ಅಧಿಕಾರಿಗಳು ಇಂತಹ ಕೃಷಿ ಸಂಸ್ಕರಣಾ ಘಟಕಗಳ ಬಲವರ್ಧನೆಯ ಬಗ್ಗೆ ಗಮನ ಹರಿಸಬೇಕು ಎಂದು ಅವರು ಸಲಹೆ ಮಾಡಿದರು.

ಕೇಂದ್ರ ಸರ್ಕಾರವು ರೈತರ ಪರವಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದೆ. ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ ನೀಡುವುದಕ್ಕೆ ಆದ್ಯತೆ ನೀಡಿದ್ದೇವೆ. 24.74 ಕೋಟಿ ರೈತರಿಗೆ ಕಿಸಾನ್ ಕಾರ್ಡ್ ನೀಡಿದ್ದೇವೆ. 8000 ಕೋಟಿಯಷ್ಟು ಮಣ್ಣಿನ ಪರೀಕ್ಷೆ ನಡೆಸಿದ್ದೇವೆ. ಕೃಷಿ ಸಿಂಚಾಯಿ ಯೋಜನೆಯಡಿ 93,000 ಕೋಟಿ ರೂ.ನಷ್ಟು ಅನುದಾನವನ್ನು ನೀರಾವರಿ ಯೋಜನೆಗಳಿಗೆ ನೀಡಿದ್ದೇವೆ. ಪ್ರಧಾನಮಂತ್ರಿ ಫಸಲ ಭಿಮಾ ಯೋಜನೆಯಡಿ 1.74 ಲಕ್ಷ ಕೋಟಿ ರೂ. ಪರಿಹಾರವನ್ನು ಅನ್ನದಾತರಿಗೆ ನೀಡಿದ್ದೇವೆ. ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ತಲಾ ಒಬ್ಬ ರೈತರಿಗೆ ವಾರ್ಷಿಕ 6 ಸಾವಿರ ರೂ.ನಂತೆ ಇದುವರೆಗೆ 3.69 ಲಕ್ಷ ಕೋಟಿ ರೂ.ನಷ್ಟು ಮೊತ್ತವನ್ನು ಕಿಸಾನ್ ಸಮ್ಮಾನ್ ನಿದಿಗೆ ಬಳಸಿದ್ದೇವೆ ಎಂದು ಅವರು ತಿಳಿಸಿದರು.

ರೈತರ ಬೆಳೆಗಳಿಗೆ ವೈಜ್ಞಾನಿಕ ರೀತಿಯಲ್ಲಿ ಬೆಂಬಲ ಬೆಲೆ ಸಿಗಬೇಕು ಎಂಬುದು ನಮ್ಮ ಆಶಯವಾಗಿದೆ. ತೊಗರಿ ಬೆಳೆಗೆ 2013–14ರಲ್ಲಿ ಪ್ರತಿ ಹೆಕ್ಟೇಟರಗೆ 4,300ರಷ್ಟು ಬೆಂಬಲ ಬೆಲೆ ನೀಡಿದ್ದು, 2025–26ನೇ ಸಾಲಿನಲ್ಲಿ ಬೆಂಬಲ ಬೆಲೆಯ ಮೊತ್ತವನ್ನು ಶೇ.84ರಷ್ಟು ಹೆಚ್ಚಿಸಿ ಪ್ರತಿ ಹೆಕ್ಟರಗೆ 8000 ರೂ. ನಿಗದಿ ಮಾಡಿದ್ದೇವೆ. ಹೆಸರು ಬೆಳೆಗೆ ಬೆಂಬಲ ಬೆಲೆಯ ಮೊತ್ತವನ್ನು ಶೇ.81ರಷ್ಟು ಹೆಚ್ಚಿಸಿ ಪ್ರತಿ ಹೆಕ್ಟರಗೆ 8800 ರೂ.ನಿಗದಿ ಮಾಡಿದ್ದೇವೆ. ಈ ಬೆಳೆಗೆ ಈ ಹಿಂದೆ ಪ್ರತಿ ಹೆಕ್ಟರಗೆ 4500 ನಿಗದಿಪಡಿಸಲಾಗಿತ್ತು ಎಂದು ಅವರು ವಿವರಿಸಿದರು.

ನೀತಿ ಆಯೋಗದಿಂದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಹತ್ವಾಕಾಂಕ್ಷಿ ಜಿಲ್ಲಾ ಕಾರ್ಯಕ್ರಮಗಳು ಜಾರಿಯಲ್ಲಿವೆ. ಈ ಭಾಗದಲ್ಲಿನ ಮಹತ್ವಾಕಾಂಕ್ಷಿ ಯೋಜನೆಗಳು ಮತ್ತು ಇತರೆ ವಿಷಯಗಳ ಬಗ್ಗೆ ಪರಿಶೀಲನೆ ನಡೆಯುತ್ತಿದೆ. ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ರಸ್ತೆ, ಕುಡಿಯುವ ನೀರು, ಬೀದಿ ದೀಪ ಅಳವಡಿಕೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ




ಕಾರ್ಯವು ಅಚ್ಚುಕಟ್ಟಾಗಿ ಆಗಬೇಕಿದೆ. ನೀತಿ ಆಯೋಗ ನಡೆಸಿದ ಸ್ಪೈರೇಷನಲ್ ಜಿಲ್ಲಾ ರ್‍ಯಾಂಕಿಂಗ್‌ನಲ್ಲಿ 2020–23ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಟಾಪ್ ಒನ್ ಸ್ಥಾನ ಮತ್ತು ದಕ್ಷಿಣ ಭಾರತದಲ್ಲಿ ಮಸ್ಕಿ ತಾಲೂಕಿಗೆ ಟಾಪ್ 8ನೇ ಸ್ಥಾನ ಲಭಿಸಿದೆ ಎಂದು ಅವರು ತಿಳಿಸಿದರು.

ಈ ವೇಳೆ ಐಟಿಸಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಸಂಜೀವ್ ಪೂರಿ ಅವರು ಮಾತನಾಡಿ, ಪ್ರತಿ ಆಯವ್ಯದಲ್ಲಿ ಕೇಂದ್ರ ಸರ್ಕಾರವು ರೈತರು ಮತ್ತು ಕೃಷಿ ಹಾಗೂ ಕೃಷಿ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ವಿಶೇಷ ಕಾರ್ಯಕ್ರಮಗಳಿಗೆ ಸೂಕ್ತ ಅನುದಾನ ಮೀಸಲಿರಿಸುತ್ತಿದೆ ಎಂದು ತಿಳಿಸಿದರು. ಕೃಷಿ ಹಾಗೂ ಕೃಷಿ ಕ್ಷೇತ್ರಗಳ ಬೆಳವಣಿಗೆಗಾಗಿ ಐಟಿಸಿ ಜೊತೆಗೆ ನಬಾರ್ಡ ಕೈಜೋಡಿಸಿದ್ದಕ್ಕೆ ಸಾಕಷ್ಟು ಅನುಕೂಲವಾಗಲಿದೆ. ಇದು ಆರಂಭವಷ್ಟೇ, ಮುಂದಿನ ದಿನಗಳಲ್ಲಿ ಇನ್ನು ಉತ್ತಮ ಕಾರ್ಯಗಳನ್ನು ಮಾಡಲಾಗುವುದು ಎಂದು ಅವರು ತಿಳಿಸಿದರು.

ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಹಣಕಾಸು ಸೇವೆಗಳ ಇಲಾಖೆಯ ಕಾರ್ಯದರ್ಶಿ ಎಂ ನಾಗರಾಜ್ ಅವರು ಮಾತನಾಡಿ, ಕೇಂದ್ರ ಹಣಕಾಸು ಸಚಿವರ ಸಂಸದರ ನಿಧಿಯ ಮೊತ್ತವನ್ನು ಬಳಸಿಕೊಂಡು ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ತಲಾ 2.54 ಕೋಟಿ ರೂ ವೆಚ್ಚದಲ್ಲಿ, ನಬಾರ್ಡ್ ಜೊತೆಗೆ ಜಂಟಿಯಾಗಿ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಅವರು ತಿಳಿಸಿದರು.

ಸಮಾರಂಭದಲ್ಲಿ ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ನಬಾರ್ಡ ಅಧ್ಯಕ್ಷರಾದ ಶಾಜಿ ಕೆ.ವಿ., ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಮುಖಂಡರಾದ ವೆಂಕಟರಾವ್ ನಾಡಗೌಡ, ಕೆ.ವಿರುಪಾಕ್ಷಪ್ಪ, ಜವಳಗೇರಾ ಗ್ರಾಪಂ ಅಧ್ಯಕ್ಷರಾದ ನಾಗಲಿಂಗ ಯಮನೂರಪ್ಪ ಹಾಗೂ ಗ್ರಾಪಂನ ಇನ್ನಿತರ ಸದಸ್ಯರು ಮತ್ತು ಇತರರು ಇದ್ದರು. ಶಂಕರ ಪ್ರಕಾಶ ಹಾಗೂ ತಂಡದವರು ನಿರೂಪಿಸಿದರು.

## ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಿ: ಜಹೀರಾ ನಸೀಮ ಸಲಹೆ

**ರಾಯಚೂರು,ಅ.17–** ಅರ್ಹತಾ ದಿನಾಂಕ 01.11.2025ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ. ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ಆಗಿರುವ ಕುಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ ಅವರು ತಿಳಿಸಿದ್ದಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ಈಗಾಗಲೇ ದಿನಾಂಕ:30.09.2025 ರಂದು ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸಲಾಗಿದ್ದು, ನಮೂನೆ 19ರಲ್ಲಿನ ಅರ್ಜಿಯನ್ನು ಸ್ವೀಕರಿಸಲು 2025ರ ನವೆಂಬರ್ 06 ಕೊನೆಯ ದಿನವಾಗಿರುತ್ತದೆ. ಕರಡು ಮತದಾರರ ಪಟ್ಟಿಯನ್ನು 2025ರ ನವಂಬರ್ 25ರ ಮಂಗಳವಾರ ಪ್ರಕಟಣೆ ಮಾಡಲಾಗುತ್ತದೆ. ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ 2025ರ ನವಂಬರ್ 25ರ ಮಂಗಳವಾರದಿಂದ 2025ರ ಡಿಸೆಂಬರ್ 10ರ ಬುಧವಾರದವರೆಗೆ ಅವಧಿ ನೀಡಲಾಗಿದೆ. ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30ರ ಮಂಗಳವಾರ ದಂದು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಮಾರ್ಗಸೂಚಿಗಳು: ಭಾರತದ ಪ್ರಜೇಯಾಗಿರುವ, ಆಯಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲು 6 ವಷಗಳ ಅವಧಿಯಲ್ಲಿ ದರ್ಜೆಯಲ್ಲಿ ಪ್ರೌಢಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೇ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ (ಬಿಯುಎಲ್‌ಕೆ) ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ, ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಂಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿದಾರರು ನಮೂನೆ–19 ರ ಅರ್ಜಿಯೊಂದಿಗೆ ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ಬೀಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ ಅಳತೆಯ ಭಾವಚಿತ್ರಗಳನ್ನು ಸಲ್ಲಿಸತಕ್ಕದ್ದು.

ಅರ್ಜಿದಾರರು ನಮೂನೆ–19ರೊಂದಿಗೆ ಲಗತ್ತಿಸಿದ ಆಧಾರ್ ಕಾರ್ಡನ ಗೌಪ್ಯತೆಯನ್ನು ಕಾಪಾಡುವ ದೃಷ್ಟಿಕೋನದಿಂದ ಆಧಾರ್ ಸಂಖ್ಯೆಯ ಪ್ರಥಮ 8 ಸಂಖ್ಯೆಯನ್ನು ಮಾಸ್ಕ್ ಮಾಡಲು ಹಾಗೂ ಅರ್ಜಿದಾರರ ಖಾಸಗಿತ್ವದ ದಾಖಲೆ ಹಾಗೂ ಮೊಬೈಲ್ ಸಂಖ್ಯೆಯನ್ನು ಯಾರಿಗೂ ನೀಡಬಾರದೆಂದು ಕಡ್ಡಾಯವಾಗಿ ಸೂಚಿಸಲಾಗಿರುತ್ತದೆ.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸತಕ್ಕದ್ದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಸಂಬಳ ಬಟವಾಡೆ ಅಧಿಕಾರಿಯಿಂದ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು. ಆಯೋಗವು ದಿನಾಂಕ:25.10.2021 ರಂದು ನೀಡಿದ ಮಾರ್ಗಸೂಚಿಗನುಗುಣವಾಗಿ ಅರ್ಹ ಮತದಾರರು ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ನೋಂದಾಯಿಸಕೂಡದೆಂದು ತಿಳಿಸುತ್ತಾ, ಅವರು ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ತಿಳಿಸಿದೆ.

ಈ ಕ್ಷೇತ್ರ ವ್ಯಾಪ್ತಿಯು ಹೊರಗಡೆ ಸೆಕಂಡರಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲದ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸಿ ಮತದಾರನಾಗಲು ಆಯೋಗದ ಮಾರ್ಗಸೂಚಿಗಳನ್ನು ಪೂರೈಸಿ ಅವರು ಈ ಚುನಾವಣಾ ಕ್ಷೇತ್ರ ವ್ಯಾಪ್ತಿಯ ಸಾಮಾನ್ಯ ನಿವಾಸಿಯಾಗಿ ಇದಕ್ಕೆ ಪೂರಕವಾಗಿರುವಂತಹ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ನೋಂದಣಿಗಾಗಿ ಅರ್ಹರಿರುತ್ತಾರೆ.

ಆಯೋಗವು ಮುಂಬರುವ ದಿನಗಳಲ್ಲಿ ಈ ನಮೂನೆ 19ರ ಅರ್ಜಿಗಳನ್ನು ಇಆರ್‌ಎಮ್‌ಎಸ್‌ನಲ್ಲಿ ಅಳವಡಿಸಲು ಉದ್ದೇಶಿಸಿರುತ್ತಾರೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತದ ಮತದಾರರ ಪಟ್ಟಿ ಸಿದ್ದಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ಈಗಾಗಲೇ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟವರಿಗೆ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ್ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸತಕ್ಕದ್ದು.

ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಎಲ್ಲಾ ಅರ್ಹ ಮತದಾರರಲ್ಲಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ

## ಹೊತ್ತಿ ಉರಿದ ಖಾಸಗಿ ಬಸ್ 36 ಪ್ರಯಾಣಿಕರು ಪಾರು

**ಬೆಂಗಳೂರು,ಅ. 17–**ನಗರದಿಂದ ಹೊರಟಿದ್ದ ಖಾಸಗಿ ಬಸ್‌ವೊಂದು ನಡು ರಸ್ತೆಯಲ್ಲೇ ಹೊತ್ತಿ ಉರಿದಿರುವ ಘಟನೆ ಅನಂತಪುರ ಜಿಲ್ಲೆಗೆ 15 ಕಿಮೀ ದೂರದಲ್ಲಿರುವ ಗರಲದಿನ್ನೆಯಲ್ಲಿ ನಡೆದಿದೆ.

ಬೆಂಗಳೂರಿನಿಂದ ರಾಯಚೂರಿಗೆ ಹೊರಟಿದ್ದ ಬಸ್ ಅನಂತಪುರದ ಬಳಿ ಚಲಿಸುತ್ತಿದ್ದಾಗ ಬೆಂಕಿಗೆ ಆಹುತಿಯಾಗಿದೆ. ಅದೃಷ್ಟವಶಾತ್ ಬಸ್‌ನಲ್ಲಿದ್ದ 36 ಮಂದಿ ಪ್ರಯಾಣಿಕರು ಸೇಫ್ ಆಗಿದ್ದಾರೆ. ಗ್ರೀನ್ ಲೈನ್ ಟ್ರಾವೆಲ್ಸ್‌ಗೆ ಸೇರಿದ ಈ ಬಸ್ ಬೆಂಗಳೂರು–ಅನಂತಪುರ ಹೈವೇನಲ್ಲಿ ಹೊರಟಿತ್ತು.




ಈ ವೇಳೆ ಟಯರ್ ಬ್ಲಾಸ್ಟ್ ಆಗಿ ಏಕಾಏಕಿ ಬೆಂಕಿ ಹೊತ್ತಿಕೊಂಡಿದೆ. ಬ್ಲಾಸ್ಟ್ ಆಗುತ್ತಿದ್ದಂತೆ ಪ್ರಯಾಣಿಕರು ತಮ್ಮ ಲಗೇಜ್‌ಗಳನ್ನೂ ಬಿಟ್ಟು ಬಸ್‌ನಿಂದ ಜಿಗಿದಿದ್ದಾರೆ. ಹೀಗಾಗಿ ಪ್ರಯಾಣಿರ ಸಂಪೂರ್ಣ ಲಗೇಜ್‌ಗಳು ಬೆಂಕಿಗೆ ಆಹುತಿಯಾಗಿದೆ. ವಿದ್ಯಾರ್ಥಿ ಗಳ ಪ್ರಮಾಣ ಪತ್ರ, ದುಬಾರಿ ವಸ್ತುಗಳು ಸುಟ್ಟು ಭಸ್ಮವಾಗಿ ವೆ.

ದೀಪಾವಳಿ ಹಬ್ಬಕ್ಕೆ ಹೊರಟಿದ್ದಾಗಲೇ ದುರಂತ ಸಂಭವಿಸಿದ್ದು, ಬಸ್‌ನಲ್ಲಿ ವಿದ್ಯಾರ್ಥಿಗಳೂ ಸೇರಿದಂತೆ ಇತರ ಪ್ರಯಾಣಿಕರೂ ಇದ್ದರು. ಸಾಲು ಸಾಲು ರಜೆ ಇದ್ದ ಕಾರಣ ದೀಪಾವಳಿ ಹಬ್ಬಕ್ಕೆಂದು ಊರಿಗೆ ಹೊರಟಿದ್ದರು. ಟಯರ್ ಬ್ಲಾಸ್ಟ್ ಆಗಿ ತಡರಾತ್ರಿ 2:30ರ ಸುಮಾರಿಗೆ ಬೆಂಕಿ ಹೊತ್ತಿಕೊಂಡಿದೆ. ಆದ್ರೂ ಚಾಲಕ ನಿರ್ಲಕ್ಷ್ಯ ವಹಿಸಿದ್ದಾನೆ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ.

ಮಹಿಳೆಯ ಸಮಯಪ್ರಜ್ಞೆ ಉಳಿಸಿತು 36 ಜೀವ

ಬಸ್‌ಗೆ ಬೆಂಕಿ ಹೊತ್ತಿಕೊಳ್ಳುತ್ತಿದ್ದರೂ ಚಾಲಕ ನಿರ್ಲಕ್ಷ್ಯ ವಹಿಸಿದ್ದಾನೆ.

ಇದೇ ವೇಳೆ ನಿದ್ರೆ ಮಂಪರಿನಲ್ಲಿದ್ದ ಮಹಿಳಾ ಪ್ರಯಾಣಿಕರೊಬ್ಬರಿಗೆ ಎಚ್ಚರವಾಗಿದೆ. ಕೂಡಲೇ ಬೆಂಕಿ ಹೊತ್ತಿಕೊಂಡಿರುವುದನ್ನು ಗಮನಿಸಿ ಕಿರುಚಿದ್ದಾರೆ. ಆದಾಗ್ಯೂ ಡ್ರೈವರ್ ಅರ್ಧ ಕಿಮೀ ಬಸ್ ನಿಲ್ಲಿಸದೇ ಹೊರಟಿದ್ದಾನೆ ಎಂಬ ಆರೋಪ ಕೂಡ ಕೇಳಿಬಂದಿದೆ. ಸದ್ಯ ಪ್ರಯಾಣಿಕರು ಸೇಫ್ ಆಗಿದ್ದರೂ, ಅವರ ಬಳಿಯಿದ್ದ ಮಹತ್ವದ ದಾಖಲೆಗಳು, ಹಬ್ಬಕ್ಕೆ ಕೊಂಡೊಯ್ಯುತ್ತಿದ್ದ ವಸ್ತುಗಳೆಲ್ಲವೂ ಸುಟ್ಟು ಭಸ್ಮವಾಗಿದೆ. ಹೀಗಾಗಿ ಪ್ರಯಾಣಿಕರು ಗ್ರೀನ್‌ಲೈನ್ ಟ್ರಾವೆಲ್ಸ್ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

## ಆರ್‌ಎಸ್‌ಎಸ್ ಪಥ ಸಂಚಲನ

**ಬಸವನ ಬಾಗೇವಾಡಿ,ಅ.17–**ಪಟ್ಟಣದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿ ಹಾಗೂ ದೀಪಾವಳಿ ಉತ್ಸವದ ಅಂಗವಾಗಿ ಸಾವಿರಕ್ಕೂ ಹೆಚ್ಚು ಗಣ ವೇಷಧಾರಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ಮಂಗಳವಾರ ಮಧ್ಯಾಹ್ನ 3 ಗಂಟೆಗೆ ಬಸವೇಶ್ವರ ಅಂತರಾಷ್ಟ್ರೀಯ ಶಾಲೆಯ ಮೈದಾನದಲ್ಲಿ ಎಲ್ಲಾ ಗಣ ತಪಸಂಚಲನಕ್ಕೆ ಚಾಲನೆ ನೀಡಲಾಯಿತು. ಅಲ್ಲಿಂದ ಬಸವೇಶ್ವರ ವೃತ್ತ ,ವೀರರಾಣಿ ಚೆನ್ನಮ್ಮ ವೃತ್ತ, ವೀರ ಯೋಧ ಅಶೋಕ ವೃತ್ತ, ವೆಂಕಟೇಶ್ವರ ದೇವಸ್ಥಾನ ಮುಖಾಂತರ ಗಣಪತಿ ಚೌಕ ಅಂಬಾಬಾಯಿ ದೇವಸ್ಥಾನ ಮಾರ್ಗವಾಗಿ ದ್ಯಾಮವ್ವನ ಗುಡಿ, ಅನಂತಸೇನನ ದೇವಸ್ಥಾನ, ಪತ್ತಾರ ಓಣಿ ಹಳೇಪಲ್ಲಿ ಕಟ್ಟಿ ಬಸವ ಸ್ಮಾರಕ ಮಾರ್ಗದಿಂದ ಯಾತ್ರಿ ನಿವಾಸ ಮೂಲಕ ವಿಜಯಪುರ ರಸ್ತೆಗೆ ಹೊಂದಿಕೊಂಡಿರುವ ಬಸವೇಶ್ವರ ಪದವಿ ಪೂರ್ವ ಕಾಲೇಜ್‌ಗೆ ಪಥ ಸಂಚಲನ ಸರಿಯಾಗಿ ಐದು ಗಂಟೆಗೆ ಬಂದು ತಲುಪಿತು.




ಸುಮಾರು ಎರಡು ಕಿಲೋಮೀಟರ್ ಗಣವೇಶಧಾರಿಗಳ ಪತ ಸಂಚಲನ ನೋಡಲು ಸಾವಿರಾರು ಮಹಿಳೆಯರು ಮಕ್ಕಳು ಹಾಗೂ ಯುವಕರು ರಸ್ತೆ ಎರಡು ಬದಿಗಳಲ್ಲಿ ಜಮಾಯಿಸಿದರು. ಹಲವು ಕಡೆ ಸಾರ್ವಜನಿಕರು ಹೂವುಗಳನ್ನು ಸ್ವಯಂಸೇವಕರ ಮೇಲೆ ಚೆಲುವ ಮೂಲಕ ಗೌರವ ಸಲ್ಲಿಸಿದರು. ಮೆರವಣಿಗೆಯಲ್ಲಿ ಸುಸ್ರಾವೆ ಬ್ಯಾಂಡ್ ಹಾಗೂ ಭಾರತ ಮಾತಾ ಕಿ ಜೈ, ಶ್ರೀ ರಾಮ್ ಜೈ ಜೈ ಘೋಷಣೆಗಳು ಮೊಳಗಿದವು. ದಾರಿ ಉದ್ದಕ್ಕೂ ಅಲ್ಲಲ್ಲಿ ಬಾಲಕರು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರ, ಮಹಾಪುರುಷರ ವೇಷ ಭೂಷಣ ಹಾಕಿ ನಿಂತಿದ್ದರು. ಬಾಲಕರು ಪಥ ಸಂಚಲನಕ್ಕೆ ಮತ್ತಷ್ಟು ಕಳೆ ತಂದರು. ನಂತರ ಬಸವೇಶ್ವರ ಪದವಿ ಪೂ ಕಾಲೇಜಿನಲ್ಲಿ ಸಮಾರೋಪ ಸಮಾರಂಭ ನಡೆಯಿತು.

ಯುವ ಮಾರ್ಗ

ಶನಿವಾರ: 18–10–2025

# ರಾಜ್ಯ ಮಾಹಿತಿ ಆಯುಕ್ತರಾದ ಬಿ ವೆಂಕಟಸಿಂಗ್ ಪ್ರವಾಸ

**ರಾಯಚೂರು,ಅ.17–**ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರಾದ ಬಿ ವೆಂಕಟಸಿಂಗ್ ಅವರು ಅಕ್ಟೋಬರ್ 19 ರಿಂದ ರಾಯಚೂರು ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಕ್ಟೋಬರ್ 19ರಂದು ಬೆಳಗ್ಗೆ 11 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ರಾತ್ರಿ 8 ಗಂಟೆಗೆ ಮಂತ್ರಾಲಯಕ್ಕೆ ಆಗಮಿಸಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 20ರಂದು ಬೆಳಗ್ಗೆ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ದಿವ್ಯದರ್ಶನ ನಂತರ ಬೆಳಗ್ಗೆ 10 ಗಂಟೆಗೆ ಮಂತ್ರಾಯಲದಿಂದ ನಿರ್ಗಮಿಸಿ ಮಧ್ಯಾಹ್ನ 2 ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 21ರಂದು ಬೆಳಗ್ಗೆ 7 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಕಲಬುರಗಿಗೆ ಪ್ರಯಾಣಿಸಿ ಬೆಳಗ್ಗೆ 10.30ಕ್ಕೆ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವರು. ಸಂಜೆ 5.30ಕ್ಕೆ ಕಲಬುರಗಿಯಿಂದ ನಿರ್ಗಮಿಸಿ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 23ರಂದು ಬೆಳಗ್ಗೆ 10 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಿ ಅಕ್ಟೋಬರ್ 24ರಿಂದ ಕರ್ನಾಟಕ ಮಾಹಿತಿ ಆಯೋಗದ ಕೇಂದ್ರ ಕಚೇರಿಯಲ್ಲಿ ರಾಜ್ಯ ಮಾಹಿತಿ ಆಯುಕ್ತರು ನಡೆಸುವ ಪ್ರಕರಣಗಳ ವಿಚಾರಣೆಯಲ್ಲಿ ಭಾಗಿಯಾಗುವರು ಎಂದು ಕರ್ನಾಟಕ ಮಾಹಿತಿ ಆಯೋಗದ ಶಾಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾದೇಶಿಕ ಆಯುಕ್ತರಿಂದ ಅಕ್ಟೋಬರ್ 18ರಂದು ಸಭೆ

**ರಾಯಚೂರು,ಅ.17–** ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 18ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ತಯಾರಿಸುವ ಕುರಿತು ಸಭೆ ನಡೆಯಲಿದೆ. ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಹಾಜರಾಗಲು ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಜೈವಿಕ ಇಂಧನ ಉದ್ಯಾನವನಕ್ಕೆ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸನಿ ಸುಧೀಂದ್ರ ಭೇಟಿ





**ರಾಯಚೂರು,ಅ.17–** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸ್ ಇ ಸುಧೀಂದ್ರ ಅವರು ಅಕ್ಟೋಬರ್ 17ರಂದು ತಿಂಥಣಿ ಹತ್ತಿರದ ಜೈವಿಕ ಇಂಧನ ಉದ್ಯಾನವನಕ್ಕೆ ಭೇಟಿ ನೀಡಿದರು.

ಜೈವಿಕ ಇಂಧನ ಉತ್ಪಾದನೆ ಹಾಗೂ ಬಳಕೆ ಬಗ್ಗೆ ರೈತರು ಹಾಗೂ ಅಧಿಕಾರಿಗಳೊಂದಿಗೆ ಅವರು ಇದೆ ವೇಳೆ ಚರ್ಚಿಸಿದರು.

ಜೈವಿಕ ಇಂಧನ ಉದ್ಯಾನದ ಸಂಯೋಜಕರಾದ ಡಾ.ಶ್ಯಾಮರಾವ್ ಕುಲಕರ್ಣಿ ಅವರು ಉದ್ಯಾನದಲ್ಲಿನ ಕಾರ್ಯ ಚಟುವಟಿಕೆಗಳ ಬಗ್ಗೆ ಅಧ್ಯಕ್ಷರಿಗೆ ವಿವರಿಸಿದರು.

ಹಾಲು ಒಕ್ಕೂಟದ ಮೂಲಕ ಹಾಲು ಸಂಗ್ರಹಣೆ ಮಾಡುವ ರೀತಿಯಲ್ಲಿ ಹೊಂಗೆ ಬೀಜಗಳನ್ನು ಸಹ ಸಂಗ್ರಹ ಮಾಡಿದಲ್ಲಿ ಜೈವಿಕ ಇಂಧನದ ಉತ್ಪಾದನೆಯ ಪ್ರಮಾಣವನ್ನು ಮತ್ತಷ್ಟು ಹೆಚ್ಚಿಸಬಹುದಾಗಿದೆ ಎಂದು ಪ್ರಗತಿಪರ ರೈತರಾದ ದೇವರೆಡ್ಡಿ ಅವರು ಇದೆ ವೇಳೆ ಸಲಹೆ ಮಾಡಿದರು.

ಜೈವಿಕ ಇಂಧನ ಉದ್ಯಾನದಲ್ಲಿನ ಸಿಬ್ಬಂದಿಯು ಇನ್ನೂ ಹೆಚ್ಚಿನ ರೀತಿಯಲ್ಲಿ ಹಳ್ಳಿಹಳ್ಳಿಗಳಿಗೆ ಸಂಚರಿಸಿ ಜೈವಿಕ ಇಂಧನ ಮಹತ್ವದ ಬಗ್ಗೆ ತಿಳಿವಳಿಕೆ ಮೂಡಿಸುವ ಕಾರ್ಯ ಮಾಡಬೇಕು. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯಿಂದ ಇನ್ನು ಹೆಚ್ಚಿನ ಅನುದಾನ ದೊರಕಿದಲ್ಲಿ ಉದ್ಯಾನದಲ್ಲಿ ಹೆಚ್ಚಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅನುಕೂವಾಗುತ್ತದೆ ಎಂದು ಮತ್ತೊಬ್ಬ ಪ್ರಗತಿಪರ ರೈತರಾದ ಗಂಗಾಧರ ನಾಯಕ್ ಅವರು ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಎಂ.ಡಿ.ಆಸಾದ್, ಸೋಮರಾಯ ಡಿ., ಜಿ ಹನುಮಂತರಾಯ ಬಿರಾದಾರ, ಚನ್ನಾರೆಡ್ಡಿ, ರತ್ನರಾಜ್ ಸಾಲಿಮಾನಿ, ಸೋಮಣ್ಣ ಹಾಲಭಾವಿ, ಬಸವರಾಜ ರಾಮದುರ್ಗ, ವೆಂಕಟೇಶ್ ಹಾವಿನಾಳ, ಭೀಮಣ್ಣ ಹುನಸಿಹೋಲಿ, ದವಳಸಾಬ ಇದ್ದರು.

# ಕೇಂದ್ರ ಸರ್ಕಾರದ ದೇಸಿ ಪ್ರಮಾಣ ಪತ್ರ ವಿತರಣೆ

ಯುವ ಮಾರ್ಗ ಸುದ್ದಿ

**ಅರಕೇರಾ,ಅ.17–** ಮುಂಗಾರು, ಹಿಂಗಾರು ವೇಳೆ ರೈತರಿಗೆ ಬೀಜ, ಗೊಬ್ಬರ, ಉಪಕರಣ, ಕೀಟನಾಶಕ ಸಮಗ್ರ ಕೃಷಿ ಹೀಗೆ ಕೃಷಿಗೆ ಸಂಬಂಧಿಸಿದ ವಸ್ತುಗಳನ್ನು ವಿತರಣೆ ಮಾಡುವ ಡೀಲರ್ಸ್‌ಗಳಲ್ಲೂ (ಕೃಷಿ ಪರಿಕರ ವಿತರಕರು)ಏಕ ರೂಪತೆ ಜಾರಿಗಾಗಿ ಕೇಂದ್ರ ಸರಕಾರ 'ದೇಸಿ ಯೋಜನೆ' ಕೋರ್ಸ್ ಜಾರಿಗೆ ತಂದಿದೆ.

ದೇಸಿ ಯೋಜನೆ' (ಡಿಪ್ಲೋಮಾ ಇನ್ ಅಗ್ರಿಕಲ್ಚರಲ್ ಎಕ್ಸ್‌ಟೆನ್‌ಶನ್ ಸರ್ವಿಸಸ್ ಫಾರ್ ಇನ್ಪುಟ್ ಡೀಲರ್ಸ್ )ಎಂದರೆ ಕೃಷಿ ಪರಿಕರ ವಿತರಿಕರಿಗೆ ಕೃಷಿ ವಿಸ್ತರಣೆ ಸೇವೆಯಲ್ಲಿ ಡಿಪ್ಲೋಮಾ ತರಬೇತಿ ಎಂದರ್ಥ.ಗ್ರಾಮೀಣ ಭಾಗದ ರೈತರೊಂದಿಗೆ ನೇರವಾಗಿ ಸಂಪರ್ಕ ಹೊಂದಿರುವ ಇವರಿಗೆ ಜ್ಞಾನ ನೀಡಿದರೆ, ಕೃಷಿಯಲ್ಲಿ ಬದಲಾವಣೆ ಸಾಧ್ಯ ಎಂಬುದು ಸರಕಾರದ ಉದ್ದೇಶ.ದೇಸಿ ಯೋಜನೆ ಜಾರಿಗೆ ತಂದಿದೆ.

ಸಮೇತಿ ಉತ್ತರ ವ್ಯಾಪ್ತಿಯಲ್ಲಿ ಬರುವ ಕೃಷಿ ತಂತ್ರಜ್ಞಾರ ಸಂಸ್ಥೆ ರಾಯಚೂರು ವತಿಯಿಂದ ಆಯೋಜಿಸಲಾಗಿದ್ದ 2023–24 ನೇಸಾಲಿನ 48 ವಾರಗಳ ಕೃಷಿ ಪರಿಕರ ಮಾರಾಟಗಾರರಿಗೆ ಡಿಪ್ಲೊಮಾ ಕೋರ್ಸ್ ನನ್ನು ದೇಸಿ ಪೂರೈಸಿದ ಹಿನ್ನಲೆಯಲ್ಲಿ ಐಎಟಿ ರಾಯಚೂರು ಸಂಸ್ಥೆಯ ಎರಡನೆ ಬ್ಯಾಚಿನವರು ಇವರಾಗಿದ್ದಾರೆ.

ಅರಕೇರಾ ಪಟ್ಟಣದಲ್ಲಿ ಶ್ರೀ ರಂಗ ಭಾಗ್ಯಶ್ರೀ ಮಾಲಕರಾದ ನಿವಾಸ ನಾಯಕ ಗುರಿಕಾರ ಇವರಿಗೆ ಅತಿ ಹೆಚ್ಚು ಅಂಕಗಳನ್ನು



ಪಡೆದ ಕಾರಣ ಗೋಲ್ಡ್ ಸರ್ಟಿಫಿಕೇಟ್ ನ್ನು ರಾಯಚೂರು ಕೃಷಿ ವಿಶ್ವವಿದ್ಯಾಲಯ ಆಡಳಿತ ಭವನದಲ್ಲಿ ಏರ್ಪಡಿಸಿದ ಕಾರ್ಯಕ್ರಮದಲ್ಲಿ ಡಾ:ಪಿ.ಎಲ್.ಪಾಟೀಲ್ ಕುಲಸಚಿವರು ಕೃಷಿ ವಿಶ್ವವಿದ್ಯಾಲಯ ಧಾರವಾಡ ಇವರು ನೀಡಿ ಗೌರವಿಸಲಾಯಿತು

# ಬಿ.ಗಣೇಕಲ್ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಅಧಿಕಾರಿಗಳ ತಂಡ ಬೇಟಿ

ಯುವ ಮಾರ್ಗ ಸುದ್ದಿ



**ಅರಕೇರಾ ,ಅ.17–**ರಾಜ್ಯ ಹಿಂದುಳಿದ ವರ್ಗಗಳ ಆಯೋ ಗದ ಮಾರ್ಗಸೂಚಿಯಂತೆ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ನಡೆಯುತ್ತಿರುವ ಹಿನ್ನೆಲೆ ಯಲ್ಲಿ ಅರಕೇರ ತಾಲೂಕಿನ ಬಿ.ಗಣೇಕಲ್ ಗ್ರಾಮದಲ್ಲಿ ಶುಕ್ರವಾರ ಸಮೀಕ್ಷೆಯ ಕಾರ್ಯ ನಡೆಯುವಅಂಗವಾಗಿ ಬಿ ಗಣೇಕಲ್ ವಲಯದ ಸರ್ಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ ಬಿ ಗಣೇಕಲ್ ಶಾಲೆಯಲ್ಲಿ ನಡೆದ ಶಾಲಾ ಮಕ್ಕಳ ಸಮೀಕ್ಷೆಗೆ ಕಾರ್ಯಕ್ಕೆ ಬೇಟಿ ನೀಡಿ ಪ ರೀಶಿಲನೆ ಮಾಡಿದರು. ಸಮನ್ವಯ ಅಧಿಕಾರಿಗಳಾದ ಶಿವರಾಜ್ ಪೂಜಾರಿ ,ಶಿವಕುಮಾರ್ ನಾಡಗೌಡ ಬಿ ಆರ್ ಪಿ ಹಾಗೂ ವೆಂಕೋಬ ನಾಯಕ್ ಪಿಡಿಒ ಗ್ರಾಮ ಗ್ರಾಮ ಪಂಚಾಯತಿ ಬಿ ಗಣೇಕಲ್ ಹಾಗೂ ಬಸಯ್ಯ ಸಾತಲ್ ಸಿ ಆರ್ ಪಿ ಬಿ ಗಣೇಕಲ್ ಆಗಮಿಸಿ ಗಣಿತದಾರರಿಗೆ ಮಾರ್ಗದರ್ಶನ ನೀಡಲಾಯಿತು ಸಮೀಕ್ಷೆ ಸಂಬಂಧ ಸಂದರ್ಭದಲ್ಲಿ ಬಸವರಾಜ್ ಸ್ವಾಮಿ ಮುಖ್ಯ ಗುರುಗಳು ಮೇಲ್ವಿಚಾರಕರು ಎಲ್ಲಾ ಗಣಿತದಾರರು ಹಾಜರಿದ್ದರು


# ಸಿರವಾರ: ರೈತನ ಪುತ್ರಿ ಪರಿಮಳಾಗೆ ಬಿಎಎಂಎಸ್ ಪದವಿ

ಯುವ ಮಾರ್ಗ ಸುದ್ದಿ

**ಸಿರವಾರ,ಅ.17–** ಶಿವಮೊಗ್ಗ ಜಿಲ್ಲೆಯ ಪ್ರತಿಷ್ಠಿತ ಸರಕಾರಿ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಭೋದನೆ ಹಾಸ್ಪಿಟಲ್ ನಲ್ಲಿ ಬಿಎ ಎಂಎಸ್ ಡಾಕ್ಟರ್ ಪದವಿ ಮುಗಿಸಿದ್ದು ರಾಯಚೂರು ಜಿಲ್ಲೆಗೆ ಹೆಮ್ಮೆಯ ವಿಷಯ

ಸಿರವಾರ ಪಟ್ಟಣದ ಕಾಂಗ್ರೆಸ್ ಯುವ ಮುಖಂಡ ಬಸವರಾಜ ಗಡ್ಲ, ಸದಾ ನಗು ಮುಖದ ವ್ಯಕ್ತಿ ಅವರ ಧರ್ಮ ಪತ್ನಿ ಮಹಾದೇವಿ ಗಡ್ಲ,ಪಟ್ಟಣ ಪಂಚಾಯತಿ ಪ್ರಥಮ ಅದ್ಯಕ್ಷೆಯಾದರೂ ಈ ದಂಪತಿಗಳ ಮೂವರು ಮಕ್ಕಳು ವೈದ್ಯಕೀಯ ಕ್ಷೇತ್ರದಲ್ಲಿ ವಿದ್ಯಾಬ್ಯಾಸ ಮಾಡುತ್ತಿದ್ದು ಪ್ರಥಮ ಪುತ್ರಿ ಡಾಕ್ಟರ್ ಪದವಿ ಮುಗಿಸಿ ಡಾ:ಕು ಪರಿಮಳ ಅವರಿಗೆ ಡಾಕ್ಟರೇಟ್ ಪದವಿಯ ಪ್ರಮಾಣ ಪತ್ರ ನೀಡಿ ಸರ್ಕಾರ ಅಭಿನಂದನೆ ಸಲ್ಲಿಸಿದೆ

ಶಿವಮೊಗ್ಗ ಜಿಲ್ಲೆಯ ಮೆಡಿಕಲ್ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರದಂದು ಹಮ್ಮಿಕೊಂಡ ಅಭಿನಂದನಾ ಸಮಾರಂಭದ ಕಾರ್ಯಕ್ರಮದಲ್ಲಿ ರಾಯಚೂರು ಜಿಲ್ಲೆಯ ಸಿರವಾರ ಪಟ್ಟಣದ ಸಾದಾರಣ ರೈತ ಬಸವರಾಜ ಗಡ್ಲ ,ಮಹಾದೇವಿ,ದಂಪತಿಯವರ ಪ್ರಥಮ ಸುಪುತ್ರಿ ಕು.ಪರಿಮಳ ಅವರು ಬಿಎಎಂಎಸ್ ಮುಗಿಸಿ ಘನ ಸರ್ಕಾರದ ವತಿಯಿಂದ ಡಾಕ್ಟರೇಟ್ ಪದವಿ ಪ್ರಮಾಣ ಪತ್ರ ಪಡೆದು ನಮ್ಮ ರಾಯಚೂರು ಜಿಲ್ಲೆಗೆ ಕೀರ್ತಿ ತಂದಿದ್ದಾರೆ, ಡಾ:ಕು.ಪರಿಮಳ ಅವರ ಸಾಧನೆ ಕಂಡು ಸಿರವಾರ ಗಣ್ಯ



ವ್ಯಕ್ತಿಗಳು,ಪಪಂ ಅದ್ಯಕ್ಷರು,ಸರ್ವಸದಸ್ಯರು,ಸಂಘ ಸಂಸ್ಥೆಗಳ ಮುಖಂಡರು,ಅಭಿನಂದನೆಗಳು ಕೋರಿ ಹರ್ಷವ್ಯಕ್ತಪಡಿಸಿದ್ದಾರೆ.

# ಇಸ್ಪೀಟ್ ಜೂಜಾಟ ಮೂವರ ಬಂಧನ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.17–**ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿಗಳಾದ ಎಂ ಪುಟ್ಟಮಾದಯ್ಯ ಅವರ ನಿರ್ದೇಶನದ ಮೇರೆಗೆ ತಾಲೂಕಿನ ಚಂದ್ರಬಂಡ ಗ್ರಾಮದಲ್ಲಿ ಇಸ್ಪೀಟ್ ಜೂಜಾಟ ನಡೆಯುತ್ತಿದ್ದ ಸ್ಥಳದಲ್ಲಿ ಯಾಪಲದಿನ್ನಿ ಪೊಲೀಸರು ದಾಳಿ ನಡೆಸಿ ಮೂವರು ಆರೋಪಿತರನ್ನು ಬಂಧಿಸಿದ್ದಾರೆ.

ಚಂದ್ರಬಂಡ ಗ್ರಾಮದ ಮಂಡಗೇರ ಹನುಮಂತನ ಮನೆಯ ಮುಂದೆ ಸಾರ್ವಜನಿಕ ಸ್ಥಳ 'ದಲ್ಲಿ ಇಸ್ಪೀಟ್ ಜೂಜಾಟ



ನಡೆಯುತ್ತಿದೆ ಎಂಬ ಮಾಹಿತಿ ಬಂದ ಹಿನ್ನೆಲೆ, ಪೊಲೀಸರು ಸ್ಥಳಕ್ಕೆ ತೆರಳಿ ರಾತ್ರಿ 10.25ಕ್ಕೆ ದಾಳಿ ನಡೆಸಿದ್ದಾರೆ. ದಾಳಿಯ ವೇಳೆ ಮೂವರು ಜೂಜಾಟದಲ್ಲಿ ತೊಡಗಿದ್ದ ಆರೋಪಿತರನ್ನು ಬಂಧಿಸಿ, ಅವರ ಬಳಿ ಇದ್ದ 4600 ನಗದು ಹಾಗೂ 52 ಇಸ್ಪೇಟ್ ಎಲೆಗಳನ್ನು ಜಪ್ತಿ ಮಾಡಿಕೊಂಡು ಪಂಚನಮ್ ನಡೆಸಲಾಗಿದೆ.ಘಟನೆ ಸಂಬಂಧ ಯಾಪಲದಿನ್ನಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇಂದು ಎಲ್‌ವಿಡಿ ಕಾಲೇಜಿನಲ್ಲಿ ಉದ್ಯೋಗ ಮೇಳ

**ರಾಯಚೂರು,ಅ.17–** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ನಗರದ ಎಲ್‌ವಿಡಿ ಕಾಲೇಜಿನಲ್ಲಿ ಇಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಸುಮಾರು 15 ವಿವಿಧ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿಮ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 8073610442ಗೆ ಇಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಅತಿಥಿ ಶಿಕ್ಷಕರ ಪ್ರವೇಶ ಪರೀಕ್ಷೆ

**ರಾಯಚೂರು,ಅ.17–** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಜೀಂ ಪ್ರೇಮ್ ಜೀ ಫೌಂಡೇಶನ್ ಆಯ್ಕೆ ಮಾಡಿರುವ ಮದರಸಾಗಳಲ್ಲಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಪ್ರವೇಶ ಪರೀಕ್ಷೆಯನ್ನು ಇಂದು ಬೆಳಿಗ್ಗೆ 11 ಗಂಟೆಯಿಂದ 12.30ರವರೆಗೆ ನಗರದ ಜಿಲ್ಲಾ ಕ್ರೀಡಾಂಗಣದ ಹತ್ತಿರದ ಹಾಸ್ಮೀಯ ಶಾಲೆಯ ಮೌಲಾನಾ ಆಜಾದ್ ಶಾಲೆಯಲ್ಲಿ ನಡೆಸಲಾಗುತ್ತಿದೆ. ಅರ್ಜಿ ಸಲ್ಲಿಸಿದ ಅರ್ಹ ಅಭ್ಯಥಿಗಳು ಪ್ರವೇಶ ಪರೀಕ್ಷೆಗೆ ಹಾಜರಾಗುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಗ್ರಾಹಕರ ಸಂವಾದ ಸಭೆ

**ರಾಯಚೂರು,ಅ.17–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಕಚೇರಿಯಲ್ಲಿ ಅಕ್ಟೋಬರ್ 18ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಕಚೇರಿ ಸ್ಥಳಾಂತರ

**ರಾಯಚೂರು,ಅ.17–** ಜಿಲ್ಲೆಯ ಜಿಲ್ಲಾ ಅಂಕಿತ ಅಧಿಕಾರಿಗಳು, ಆಹಾರ ಸುರಕ್ಷತೆ ಮತ್ತ ಔಷದ ಆಡಳಿತ, ಕಾರ್ಯಾಲಯದ ಕಟ್ಟಡವನ್ನು ಸಹಾಯಕ ಔಷದ ನಿಯಂತ್ರಕರ ಕಚೇರಿ ರಾಯಚೂರು ವೃತ್ತ, ಸರ್ವೆ ಸಂಖ್ಯೆ. 122, ಎಕ್ಲಾಸ್‌ಪುರ ರಸ್ತೆ, ಕಲ್ಯಾಣ ನಗರ ಲೇಔಟ್, ರಾಯಚೂರು–584101ರ ಕಟ್ಟಡದ ಒಂದನೇ ಮಹಡಿಗೆ ಸ್ಥಳಾಂತರಗೊಳಿಸಲಾಗಿದೆ ಎಂದು ರಾಯಚೂರು ಸಹಾಯಕ ಆಯುಕ್ತರು ಹಾಗೂ ಆಹಾರ ಸುರಕ್ಷತೆ ಹಾಗೂ ಔಷದ ಆಡಳಿತದ ಜಿಲ್ಲಾ ಅಂಕಿತ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ಟೋಬರ್ 28ರಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ

**ರಾಯಚೂರು,ಅ.17–**ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025–26ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜಿಲ್ಲೆಯ ರೈತರಿಂದ ಬಿಳಿಜೋಳವನ್ನು ನೋಂದಣಿ ಹಾಗೂ ಖರೀದಿಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರದ ನಡವಳಿಗಳಲ್ಲಿನ ಮಾರ್ಗಸೂಚಿಗಳನ್ವಯ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿದೆ.

ಈ ವಿಷಯದ ಬಗ್ಗೆ ಚರ್ಚಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 28ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H